ಆ) ಬಳ್ಳಗೇರಿ ಮತ್ತು ಸಂಬರಗಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಐಗಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಬಂದಿರುವುದಿಲ್ಲ.

ಅಥಣಿ ತಾಲ್ಲೂಕಿನಲ್ಲಿ ಕಾಲೇಜಿನ ಅವಶ್ಯಕತೆ

702 (974) ಶ್ರೀ ಡೊಂಗರ ಗಾಂವ ಶಹಜಾನ್ ಇಸ್ಮಾಯಿಲ್ (ಅಥಣಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನಲ್ಲಿನ ಜನರು ಶೈಕ್ಷಣಿಕ ಸೌಲಭ್ಯದಿಂದ ವಂಚಿತರಾಗಿ ಚಳುವಳಿಗೆ ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಳ್ಳೆಗೇರಿ ಹಾಗೂ ಕೊಕಟನೂರು ಗ್ರಾಮಗಳಲ್ಲಿ ಅತೀ ಹೆಚ್ಚಿನ ವಿದ್ಯಾರ್ಥಿಗಳಿದ್ದು, ಪದವಿ ಪೂರ್ವ ಕಾಲೇಜುಗಳ ಅವಶ್ಯಕತೆ ಬೇಡಿಕೆ ಇದ್ದು, ಇಲ್ಲಿ ಹೊಸ ಕಾಲೇಜು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ? ಪ್ರಸಕ್ತ ಅವಧಿಯಲ್ಲಾದರೂ ಮಂಜೂರಾತಿ ಮಾಡಲಾಗುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾ. ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಇಲ್ಲ

ಆ) ಈಗಾಗಲೇ ಅಥಣಿ ತಾಲ್ಲೂಕಿನಲ್ಲಿ 11 ಪದವಿ ಪೂರ್ವ ಕಾಲೇಜುಗಳು ಇರುವುದಿರಿಂದ ಬಳ್ಳಿಗೇರಿ ಹಾಗೂ ಕೊಕಟನೂರ ಗ್ರಾಮಗಳಲ್ಲಿ ಪ್ರತ್ಯೇಕ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದಿಲ್ಲ.

ಪಂಚಾಯತ್ ರಾಜ್ ಇಲಾಖೆಯ ವೃಂದ ಮತ್ತು ನೇಮಕಾತಿ

703 (750) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಂಚಾಯತ್ ರಾಜ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳು ಅಂತಿಮವಾಗಿ ರೂಪುಗೊಂಡು ಪ್ರಕಟವಾಗಿಲ್ಲವೇ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅತ್ಯಂತ ಹಿಂದಾದ ಮತ್ತು ಹಳೆಯದಾದ ಈ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ ರೂಪುಗೊಂಡು ಜಾರಿಗೆ ಕೊಡಲು ಇರುವ ತೊಡಕುಗಳೇನು?

ಇ) ಈ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆಗೆ ಇರುವ ನಿರ್ಬಂಧಗಳೇನು?

ಈ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಲು ಕಾಲಮಿತಿ ನಿಗದಿಪಡಿಸಲಾಗಿದೆಯೇ; ಹೌದಾದರೆ ಯಾವಾಗ ಜಾರಿಗೊಳಿಸಲಾಗುವುದು?